# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ: 03-04-2021 ರಂದು ಸಮಯ 10.30 ಗಂಟೆಗೆ ವಾರ್ಡ್ ಸಂಖ್ಯೆ:155 ಹನುಮಂತನಗರಕ್ಕೆ ಸಂಬಂಧಪಟ್ಟಂತೆ ಹರಿಹರಗುಡ್ಡ ಉದ್ಯಾನವನ (ತಿಮ್ಮೇಶಪ್ರಭು ಉದ್ಯಾನವನ) ದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು.**

1. ಶ್ರೀ ಕೆ.ಚಂದ್ರಶೇಕರ್ (ಕಂದಾಯ ಅಧಿಕಾರಿ ಮಹದೇವಪುರ), ನೋಡಲ್ ಅಧಿಕಾರಿಗಳು – ಅಧ್ಯಕ್ಷರು
2. ಶ್ರೀ ಆನಂದ್.ಜಿ, ಕಿರಿಯ ಅಭಿಯಂತರರು ವಾ.ನಂ.–155 – ಸದಸ್ಯ ಕಾರ್ಯದರ್ಶಿ
3. ಶ್ರೀ. ನಟರಾಜ್ (ಹಿ.ಆ.ಪ.) – ಸದಸ್ಯರು
4. ಶ್ರೀ ಪ್ರಕಾಶ್ (ಟಿ.ಇ.)– ಸದಸ್ಯರು
5. ಶ್ರೀ.ರಾಮಚಂದ್ರ (ಕಿ.ಅ–155) ಬೆಸ್ಕಾಂ
6. ಶ್ರೀ ಪಿಳ್ಳಪ್ಪ – ಸಾರ್ವಜನಿಕರು.
7. ಶ್ರೀ ಉದಯ– ಸಾರ್ವಜನಿಕರು.
8. ಶ್ರೀ ರಾಜು– ಸಾರ್ವಜನಿಕರು.
9. ಶ್ರೀ ಎಂ.ಚಂದ್ರಶೇಖರ್ – ಸಾರ್ವಜನಿಕರು.
10. ಶ್ರೀ ಸುರೇಶ್ ಕುಮಾರ್ – ಸಾರ್ವಜನಿಕರು.
11. ಶ್ರೀಮತಿ ದೇವಕಿ– ಸಾರ್ವಜನಿಕರು.

****

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ನಂ. 155ರ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರು ತಿಳಿಸಿರುವ ಮೇರೆಗೆ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರನ್ನು / ಅಧಿಕಾರಿಗಳನ್ನು ಮತ್ತು ಸ್ಥಳೀಯ ಸಾರ್ವಜನಿಕರನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

**ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ವಿಷಯಗಳು.**

1) ಚಂದ್ರಗುಪ್ತ ಮೌರ್ಯ ರಸ್ತೆಯು ತುಂಬಾ ಹಾಳಾಗಿದ್ದು ರಸ್ತೆಯ ಡಾಂಬರೀಕರಣ ಮಾಡಿಕೊಂಡುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಸ್ಥಳ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕಿರಿಯ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿಗಳು ರವರು ತಿಳಿಸಿದರು.

2. ವರ್ಷಋತು ರಸ್ತೆಯಲ್ಲಿ ಸಾರ್ವಜನಿಕರು/ಅಂಗಡಿಯವರು ಪಾದಚಾರಿ ಮಾರ್ಗದಲ್ಲಿ ಅನುಪಯುಕ್ತ ವಸ್ತುಗಳನ್ನು ಹಾಕಿರುತ್ತಾರೆ ಈ ಸಂಬಂಧ ಸಂಬಂಧಪಟ್ಟವರಿಗೆ ನೋಟಿಸನ್ನು ನೀಡಿ ತೆರವುಗೊಳಿಸಲು ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಸ್ಥಳ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕಿರಿಯ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿಗಳು ತಿಳಿಸಿದರು. ಸಾರ್ವಜನಿಕರು ಓಡಾಡುವ ಪಾದಚಾರಿ ಮಾರ್ಗದಲ್ಲಿ ಅನುಪಯುಕ್ತ ವಸ್ತುಗಳನ್ನು ಹಾಕಿರುವವರಿಗೆ ನೋಟೀಸ್ ಜಾರಿ ಮಾಡಲು ಹಾಗೂ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ದಾಖಲಿಸಲು ಅಧ್ಯಕ್ಷರು ಸದಸ್ಯ ಕಾರ್ಯದರ್ಶಿಗಳಿಗೆ ಸೂಚಿಸಿದರು.

**ಬೀದಿ ದೀಪ ನಿರ್ವಹಣೆ ಕುರಿತು**

1) ವಿದ್ಯುತ್ ದೀಪ ಉರಿಯುತ್ತಿಲ್ಲವೆಂದು ಕಮಲ ನರ್ಸಿಂಗ್ ಹೋಂ ಮತ್ತು 5ನೇ ಮುಖ್ಯರಸ್ತೆಯಲ್ಲಿ ಸರಿಪಡಿಸಿಕೊಳ್ಳಲು ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಮು.ತಿ.ನೋ,

Scanned with CamScanner

ಸದರಿ ವಿದ್ಯುತ್ ದೀಪ ಸರಿಪಡಿಸಲು ಕಾರ್ಯಪಾಲಕ ಅಭಿಯಂತರರು ವಿದ್ಯುತ್ ದಕ್ಷಿಣ ವಲಯ ಬಿ.ಬಿ.ಎಂ.ಪಿ. ರವರಿಗೆ ಸೂಚಿಸಲು ತಿಳಿಸಲಾಯಿತು ಹಾಗೂ ಸಭೆಯಲ್ಲಿ ಹಾಜರಿದ್ದ ವಿದ್ಯುತ್ ಗುತ್ತಿಗೆದಾರರಿಗೆ ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರು ತಿಳಿಸಿದರು ಮತ್ತು ರಾತ್ರಿ ವೇಳೆಯಲ್ಲಿ ವಾರ್ಡ್‌ನ ಎಲ್ಲಾ ರಸ್ತೆಗಳಲ್ಲಿ ಸಂಚರಿಸಿ, ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ವೀಕ್ಷಣೆ ಮಾಡಲು ಸೂಚಿಸಲಾಯಿತು.

**ಅರಣ್ಯ ವಿಭಾಗ:**

ಹನುಮಂತನಗರದ 10ನೇ ಮುಖ್ಯರಸ್ತೆಯ ಲಕ್ಷ್ಮೀಪುರದಲ್ಲಿ ಮರದ ಕೊಂಬೆಯನ್ನು ತೆರವು ಮಾಡಿಕೊಡುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಸ್ಥಳ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲು ಉಪ ಅರಣ್ಯ ಸಂರಕ್ಷಣಾಧಿಕಾರಿ(ದ) ಬಿ.ಬಿ.ಎಂ.ಪಿ. ರವರಿಗೆ ಅಧ್ಯಕ್ಷರು ಸೂಚಿಸಿದರು. ಹಾಗೂ ವಾರ್ಡ್‌ನ ಇತರೆಡೆ ಒಣಗಿರುವ ಮರಗಳನ್ನು / ಕೊಂಬೆಗಳನ್ನು ಗುರುತಿಸಿ ಅವುಗಳನ್ನು ತೆರವುಗೊಳಿಸಲು ಸೂಚಿಸಿದರು.

**ತೋಟಗಾರಿಕೆ ಇಲಾಖೆ:**

1) ಹನುಮಂತನಗರ ವಾರ್ಡ್‌ನಲ್ಲಿ ಬರುವ ಜಿಂಕೆ ಪಾರ್ಕ್, ಹರಿಹರಗುಡ್ಡ ಪಾರ್ಕ್ ಮತ್ತು ಇತರೇ ಪಾರ್ಕ್‌ಗಳಲ್ಲಿ ಸರಿಯಾಗಿ ನಿರ್ವಹಣೆ ಮಾಡುತ್ತಿರುವುದಿಲ್ಲವೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ಪಾರ್ಕ್‌ಗಳಲ್ಲಿ ಸೂಕ್ತ ನಿರ್ವಹಣೆ ಮಾಡದೇ ಇರುವ ಬಗ್ಗೆ ಪರಿಶೀಲನೆ ಸಮಯದಲ್ಲಿ ತಮ್ಮ ಗಮನಕ್ಕೆ ಬಂದಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ತೋಟಗಾರಿಕೆ ಅಧೀಕ್ಷಕರು ಹಾಗೂ ಪಾರ್ಕ್ ನಿರ್ವಹಣೆಯ ಗುತ್ತಿಗೆದಾರರಿಗೆ ಅಧ್ಯಕ್ಷರು ಸೂಚಿಸಿದರು.

ವಾರ್ಡ್ ಕಮಿಟಿ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿ ವರ್ಗದವರಿಗೆ, ವಾರ್ಡ್ ಕಮಿಟಿ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ಪ್ರತಿ ತಿಂಗಳ ಮೊದಲನೆಯ ಮತ್ತು ಮೂರನೇ ಶನಿವಾರದಂದು ವಾರ್ಡ್ ಕಮಿಟಿ ಸಭೆಯನ್ನು ಏರ್ಪಡಿಸಲಾಗುವುದು ಎಂದು ತಿಳಿಸುತ್ತಾ, ವಂದನಾರ್ಪಣೆ ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

03/04/21 — 03.04.21

ಕಾರ್ಯದರ್ಶಿ
ಕಿರಿಯ ಅಭಿಯಂತರರು
ವಾರ್ಡ್ ಸಂಖ್ಯೆ-155 ಹನುಮಂತನಗರ

ಅಧ್ಯಕ್ಷರು ವಾರ್ಡ್ ಸಮಿತಿ
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ-155 ಹನುಮಂತನಗರ

**ಪ್ರತಿಯನ್ನು,**

1. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
2. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
3. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
4. ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ ಹನುಮಂತನಗರ ರವರ ಅವಗಾಹನೆಗೆ.
6. ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಸಂಚಾರಿ ಪೋಲೀಸ್ ಠಾಣೆ ರವರ ಅವಗಾಹನೆಗೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ., ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
8. ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
9. ಕಛೇರಿ ಕಡತಕ್ಕೆ.

Scanned with CamScanner